**Akashvani : Bangalore**
**National Bulletin In Kannada**
**03.07.2024 / 7.35 am**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**03.07.2024 / 7.35 am**

**<><*<><>*><>**

ಮುಖ್ಯಾಂಶಗಳು

೧. ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣ ಕುರಿತು ಸರ್ಕಾರದಿಂದ ಯುದ್ಧೋಪಾದಿಯಲ್ಲಿ ಕ್ರಮ- ಪ್ರಧಾನಮಂತ್ರಿ ನರೇಂದ್ರ ಮೋದಿ

೨. ಹತ್ರಾಸ್‌ನಲ್ಲಿ ಸಂಭವಿಸಿದ ಕಾಲ್ತುಳಿತಕ್ಕೆ ೧೧೬ ಮಂದಿ ದುರ್ಮರಣ; ಮೃತರ ಕುಟುಂಬಗಳಿಗೆ ಪರಿಹಾರ ಘೋಷಣೆ

೩. ಎಸ್‌ಸಿಒ ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ಕಜಕಿಸ್ತಾನ್ ತಲುಪಿದ ಸಚಿವ ಡಾ.ಎಸ್.ಜೈಂಶಕರ್; ಸಹವರ್ತಿಗಳೊಂದಿಗೆ ದ್ವಿಪಕ್ಷೀಯ ಮಾತುಕತೆಯಲ್ಲಿ ಭಾಗಿ

೪. ಯುರೋ ಕಪ್ ಫುಟ್‌ಬಾಲ್ ೨೦೨೪ ; ಕ್ವಾರ್ಟರ್ ಫೈನಲ್ಸ್ ಪ್ರವೇಶಿಸಿದ ಟರ್ಕಿ

**<><*<><>*><>**

ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣವನ್ನು ಸರ್ಕಾರ, ಗಂಭೀರವಾಗಿ ಪರಿಗಣಿಸಿದ್ದು, ತಪ್ಪಿತಸ್ಥರ ವಿರುದ್ಧ ಕಠಿಣಕ್ರಮ ಕೈಗೊಳ್ಳಲಾಗುವುದು ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ತಿಳಿಸಿದ್ದಾರೆ.ಲೋಕಸಭೆಯಲ್ಲಿ ನಿನ್ನೆ ಉಭಯ ಸದನಗಳನ್ನುದ್ದೇಶಿಸಿ ರಾಷ್ಟ್ರಪತಿ ಭಾಷಣದ ಮೇಲಿನ ವಂದನಾ ನಿರ್ಣಯಕ್ಕೆ ಉತ್ತರಿಸಿದ ಅವರು, ದೇಶಾದ್ಯಂತ ವಿವಿಧೆಡೆ ನೀಟ್ ಪರೀಕ್ಷೆ ಪ್ರಕರಣಕ್ಕೆ ಸಂಬಂಧಿಸಿದಂತೆ ಹಲವರನ್ನು ಬಂಧಿಸಲಾಗಿದೆ. ಇದರಲ್ಲಿ ಯಾವುದೇ ಲೋಪದೋಷಗಳಾಗದೆ, ಯುದ್ಧೋಪಾದಿಯಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ. ಇಂತಹ ಅನಾಹುತಗಳನ್ನು ಎದುರಿಸಲು ಸರ್ಕಾರ ಈಗಾಗಲೇ ಬಲವಾದ ಕಾನೂನನ್ನು ತಂದಿದೆ ಎಂದು ಅವರು ತಿಳಿಸಿದರು. ಸ್ಥಿರ ಸರ್ಕಾರಕ್ಕಾಗಿ ಜನರು ಎನ್‌ಡಿಎಗೆ ಜನಾದೇಶ ನೀಡಿದ್ದಾರೆ. ಮೂರನೇ ಅವಧಿಯಲ್ಲೂ ಸರ್ಕಾರ, ಮೂರು ಪಟ್ಟು ಹೆಚ್ಚು ವೇಗವಾಗಿ ಕೆಲಸ ಮಾಡುತ್ತದೆ ಎಂದು ಪ್ರಧಾನಿ ಪ್ರತಿಪಾದಿಸಿದರು. ತಮ್ಮ ಸರ್ಕಾರ ಸಬ್ಕಾ ಸಾಥ್ ಸಬ್ಕಾ ವಿಕಾಸ್ ಎಂಬ ಮಂತ್ರದೊಂದಿಗೆ ಕೆಲಸ ಮಾಡುತ್ತಿದೆ ಎಂದು ಅವರು ಹೇಳಿದರು. ರಾಷ್ಟ್ರಪತಿಗಳ ಭಾಷಣ, ವಿಕಸಿತ ಭಾರತ್‌ನ ಸಂಕಲ್ಪವನ್ನು ವಿವರಿಸಿದೆ ಮತ್ತು ದೇಶಕ್ಕೆ ಮಾರ್ಗದರ್ಶನ ನೀಡಲು ನಿರ್ಣಾಯಕ ವಿಷಯಗಳನ್ನು ಪ್ರಸ್ತಾಪಿಸಿದೆ. ಉತ್ತರ ಪ್ರದೇಶದ

ಹತ್ರಾಸ್‌ನಲ್ಲಿ ಸಂಭವಿಸಿದ ಕಾಲ್ತುಳಿತದಲ್ಲಿ ಪ್ರಾಣಹಾನಿಯಾಗಿರುವ ಬಗ್ಗೆ ಪ್ರಧಾನಿ ಸಂತಾಪ ವ್ಯಕ್ತಪಡಿಸಿದ್ದಾರೆ. ಸಂತ್ರಸ್ತರಿಗೆ ಸರ್ಕಾರ ಎಲ್ಲ ರೀತಿಯ ನೆರವು ನೀಡಲಿದೆ ಎಂದರು. ಪ್ರಧಾನಿ ಭಾಷಣ ಮಾಡುತ್ತಿದ್ದಾಗ ಪ್ರತಿಪಕ್ಷಗಳ ಸಂಸದರು ವಿವಿಧ ವಿಷಯಗಳ ಕುರಿತು ಸದನದ ಬಾವಿಗಿಳಿದು ಪ್ರತಿಭಟನೆ ನಡೆಸಿದರು. ಸ್ಪೀಕರ್ ಓಂ ಬಿರ್ಲಾ ಅವರು ಪ್ರತಿಪಕ್ಷಗಳ ವರ್ತನೆಯ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು ಮತ್ತು ಸದನದಲ್ಲಿ ಸುವ್ಯವಸ್ಥೆ ಕಾಪಾಡುವಂತೆ ಆಗ್ರಹಿಸಿದರು. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಪ್ರಧಾನಿ ಭಾಷಣದ ವೇಳೆ ವಿರೋಧ ಪಕ್ಷದ ಸಂಸದರು ಸೃಷ್ಟಿಸಿದ ಗದ್ದಲವನ್ನು ಖಂಡಿಸುವ ನಿರ್ಣಯವನ್ನು ಮಂಡಿಸಿದರು. ಗೃಹ ಸಚಿವ ಅಮಿತ್ ಶಾ ಅವರು ನಿರ್ಣಯವನ್ನು ಅನುಮೋದಿಸಿದರು ಮತ್ತು ನಂತರ ಅದನ್ನು ಧ್ವನಿ ಮತದ ಮೂಲಕ ಸದನವು ಅಂಗೀಕರಿಸಿತು. ರಾಜ್ಯಸಭೆಯಲ್ಲಿ, ಚರ್ಚೆಯಲ್ಲಿ ಭಾಗವಹಿಸಿದ ಎಜಿಪಿ ಪಕ್ಷದ ಬೀರೇಂದ್ರ ಪ್ರಸಾದ್ ಬೈಶ್ಯಾ ಅವರು ಅಸ್ಸಾಂನ ಆರು ಸಮುದಾಯಗಳನ್ನು ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸೇರಿಸುವ ವಿಷಯವನ್ನು ಪ್ರಸ್ತಾಪಿಸಿದರು. ಅವರು ರಾಜ್ಯದಲ್ಲಿ ಅಕ್ರಮ ವಲಸಿಗರ ಸಮಸ್ಯೆಗಳ ಬಗ್ಗೆ ಮಾತನಾಡಿದರು.

<><*<><>*><>

ಉತ್ತರ ಪ್ರದೇಶದ ಹತ್ರಾಸ್‌ನಲ್ಲಿ ಭೋಲೆ ಬಾಬಾ ಸತ್ಸಂಗ ಕಾರ್ಯಕ್ರಮದಲ್ಲಿ ಉಂಟಾದ ಕಾಲ್ತುಳಿತದಲ್ಲಿ ೧೧೬ ಮಂದಿ ಮೃತಪಟ್ಟಿದ್ದು, ಅನೇಕರು ಗಾಯಗೊಂಡಿದ್ದಾರೆ. ಹತ್ರಾಸ್ ಜಿಲ್ಲೆಯ ಪುಲರೈ ಗ್ರಾಮದಲ್ಲಿ ಏರ್ಪಡಿಸಿದ್ದ ಸತ್ಸಂಗದಲ್ಲಿ ಅಪಾರ ಪ್ರಮಾಣದ ಭಕ್ತರು ಪಾಲ್ಗೊಂಡರು. ಈ ವೇಳೆ ಕಾಲ್ತುಳಿತದಲ್ಲಿ ಅನೇಕ ಮಹಿಳೆಯರು ಸೇರಿದಂತೆ ೧೧೬ ಮಂದಿ ಸಾವನ್ನಪ್ಪಿದ್ದಾರೆ. ಘಟನೆಯಲ್ಲಿ ಸುಮಾರು ಅನೇಕರು ಗಾಯಗೊಂಡಿದ್ದು, ಸ್ಥಳೀಯ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಇಲ್ಲಿಯವರೆಗೆ ಸುಮಾರು ೭೨ ಮೃತ ದೇಹಗಳನ್ನು ಗುರುತಿಸಲಾಗಿದೆ ಎಂದು ಉತ್ತರಪ್ರದೇಶ ಮುಖ್ಯ ಕಾರ್ಯದರ್ಶಿ ಮನೋಜ್ ಸಿಂಗ್ ಹೇಳಿದ್ದಾರೆ. ಘಟನೆ ಕುರಿತು ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಪ್ರಧಾನಿ ನರೇಂದ್ರ ಮೋದಿ, ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಸಂತಾಪ ಸೂಚಿಸಿದ್ದು, ಗಾಯಳುಗಳು ಶೀಘ್ರ ಗುಣಮುಖರಾಗಲಿ ಎಂದು ಹಾರೈಸಿದ್ದಾರೆ. ಇದೇ ವೇಳೆ ಮೃತರ ಕುಟುಂಬಗಳಿಗೆ ತಲಾ ೨ ಲಕ್ಷ ರೂಪಾಯಿ ಹಾಗೂ ಗಾಯಗೊಂಡವರಿಗೆ ತಲಾ ೫೦ ಸಾವಿರ ರೂಪಾಯಿ ಪರಿಹಾರವನ್ನು ಪ್ರಧಾನಮಂತ್ರಿ ಘೋಷಿಸಿದ್ದಾರೆ. ಹಾಗಯೇ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಕೂಡ ಮೃತ ಕುಟುಂಬಗಳಿಗೆ ತಲಾ ೨ ಲಕ್ಷ ರೂಪಾಯಿ ಹಾಗೂ ಗಾಯಗೊಂಡವರಿಗೆ ತಲಾ ೫೦ ಸಾವಿರ ರೂಪಾಯಿ ಪರಿಹಾರವನ್ನು ಘೋಷಿಸಿದ್ದಾರೆ.

<><*<><>*><>

ಶಿಕ್ಷಣ ಸಚಿವಾಲಯವು ೨೦೨೪ ನೇ ಸಾಲಿನ ರಾಷ್ಟ್ರೀಯ ಶಿಕ್ಷಕರ ಪ್ರಶಸ್ತಿಗಳಿಗಾಗಿ ಅರ್ಹ ಶಿಕ್ಷಕರಿಂದ ಸ್ವಯಂ-ನಾಮನಿರ್ದೇಶನಗಳನ್ನು ಆಹ್ವಾನಿಸಿದೆ. ಆನ್‌ಲೈನ್ ನಾಮನಿರ್ದೇಶನಗಳನ್ನು ಸಲ್ಲಿಸಲು ಇದೇ ೧೫ ಕೊನೆಯ ದಿನವಾಗಿದೆ. ಈ ವರ್ಷ ಜಿಲ್ಲೆ, ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಒಟ್ಟು ೫೦ ಶಿಕ್ಷಕರನ್ನು ಮೂರು ಹಂತದ ಆಯ್ಕೆ ಪ್ರಕ್ರಿಯೆಯ ಮೂಲಕ ಆಯ್ಕೆ ಮಾಡಲಾಗುವುದು ಎಂದು ಸಚಿವಾಲಯ ತಿಳಿಸಿದೆ. ಸೆಪ್ಟೆಂಬರ್ ೫ ರಂದು ನವದೆಹಲಿಯಲ್ಲಿ ಶಿಕ್ಷಕರ ದಿನದಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಈ ಪ್ರಶಸ್ತಿಯನ್ನು ಪ್ರದಾನ ಮಾಡಲಿದ್ದಾರೆ. ಅರ್ಹ ಶಿಕ್ಷಕರು ತಮ್ಮ ನಾಮನಿರ್ದೇಶನಗಳನ್ನು ಸಚಿವಾಲಯದಜಾಲತಾಣ www.nationalawardstoteachers.education.gov.in ಗೆ ಕಳುಹಿಸಬಹುದಾಗಿದೆ.

<><*<><>*><>

ಭಾರತೀಯ ರೈಲ್ವೆ ಈ ವರ್ಷದ ಜೂನ್‌ನಲ್ಲಿ ಸರಕು ಸಾಗಣೆಯಿಂದ ೧೪ ಸಾವಿರ ೭೯೮ ಕೋಟಿ ರೂಪಾಯಿಗಳನ್ನು ಗಳಿಸಿದೆ, ಇದು ಕಳೆದ ವರ್ಷಕ್ಕೆ ಹೋಲಿಸಿದರೆ ಶೇಕಡಾ ೧೧ ಕ್ಕಿಂತ ಹೆಚ್ಚಾಗಿದೆ. ರೈಲ್ವೇ ಸಚಿವಾಲಯವು ಜೂನ್‌ನಲ್ಲಿ ೧೩೫ ಮಿಲಿಯನ್ ಟನ್‌ಗೂ ಹೆಚ್ಚು ಸರಕು ಸಾಗಣೆಯನ್ನು ಸಾಧಿಸಿದ್ದು, ಕಳೆದ ವರ್ಷ ಇದೇ ತಿಂಗಳಿನಲ್ಲಿ ಸುಮಾರು ೧೨೩ ಮಿಲಿಯನ್ ಟನ್‌ಗಳಷ್ಟು ಸಾಗಣೆ ಮಾಡಿತ್ತು. ಭಾರತೀಯ ರೈಲ್ವೆ ೬೦ ಮಿಲಿಯನ್ ಟನ್ ಕಲ್ಲಿದ್ದಲು, ೧೫ ಮಿಲಿಯನ್ ಟನ್ ಕಬ್ಬಿಣದ ಅದಿರು, ಏಳು ಮಿಲಿಯನ್ ಟನ್ ಸಿಮೆಂಟ್ ಮತ್ತು ನಾಲ್ಕು ಮಿಲಿಯನ್ ಟನ್ ಆಹಾರ ಧಾನ್ಯಗಳನ್ನು ಸಾಗಿಸಿದೆ ಎಂದು ಸಚಿವಾಲಯ ತಿಳಿಸಿದೆ.

<><*<><>*><>

ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಅವರು ನಾಳೆ ನಡೆಯಲಿರುವ ಶಾಂಘೈ ಸಹಕಾರ ಸಂಸ್ಥೆಯ ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ಕಜಕಿಸ್ತಾನದ ಅಸ್ತಾನಾ ತಲುಪಿದ್ದಾರೆ. ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಪ್ರತಿನಿಧಿಸುತ್ತಿರುವ ಅವರು ಭಾರತೀಯ ನಿಯೋಗವನ್ನು ಮುನ್ನಡೆಸಲಿದ್ದಾರೆ. ಆಸ್ತಾನಾಗೆ ಆಗಮಿಸಿದ ಡಾ.ಎಸ್.ಜೈಶಂಕರ್ ಅವರನ್ನು ಕಜಕಿಸ್ತಾನದ ಉಪ ವಿದೇಶಾಂಗ ಸಚಿವ ಅಲಿಬೆಕ್ ಬಕಾಯೇವ್ ಸ್ವಾಗತಿಸಿದರು. ವಿದೇಶಾಂಗ ಸಚಿವರು ನಿನ್ನೆ ಕಝುಕ್‌ಸ್ತಾನ್‌ನ ಉಪಪ್ರಧಾನಿ ಮತ್ತು ವಿದೇಶಾಂಗ ಸಚಿವ ಮುರಾತ್ ನರ್‌ಟ್ಲು ಅವರನ್ನು ಭೇಟಿಯಾಗಿ, ಎಸ್‌ಸಿಒ ಕೌನ್ಸಿಲ್ ಆಫ್ ಹೆಡ್ಸ್ ಆಫ್ ಸ್ಟೇಟ್ ಶೃಂಗಸಭೆಯ ಆತಿಥ್ಯ ಮತ್ತು ವ್ಯವಸ್ಥೆಗಳಿಗಾಗಿ ಧನ್ಯವಾದ ಅರ್ಪಿಸಿದರು. ಇದೇ ವೇಳೆ ಅವರು, ಉಭಯ ದೇಶಗಳ ನಡುವೆ ವಿಸ್ತರಿಸುತ್ತಿರುವ ಕಾರ್ಯತಂತ್ರದ ಪಾಲುದಾರಿಕೆ ಹಾಗೂ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಬಗ್ಗೆ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು. ಶೃಂಗಸಭೆಯಲ್ಲಿ, ಕಳೆದ ಎರಡು ದಶಕಗಳಲ್ಲಿ ಸಂಸ್ಥೆಯ ಚಟುವಟಿಕೆಗಳನ್ನು ಪರಿಶೀಲಿಸುವ ಜೊತೆಗೆ ಬಹುಪಕ್ಷೀಯ ಸಹಕಾರದ

ಪ್ರಸ್ತುತ ಸ್ಥಿತಿ ಮತ್ತು ಭವಿಷ್ಯವನ್ನು ಚರ್ಚಿಸಲು ನಿರೀಕ್ಷಿಸಲಾಗಿದೆ. ಪ್ರಾದೇಶಿಕ ಮತ್ತು ಅಂತರಾಷ್ಟ್ರೀಯ ಪ್ರಾಮುಖ್ಯತೆಯ ವಿಷಯಗಳ ಬಗ್ಗೆಯೂ ಸಭೆಯಲ್ಲಿ ಚರ್ಚೆಯಾಗುವ ನಿರೀಕ್ಷೆಯಿದೆ. ಸಭೆಯಲ್ಲಿ ಭಾರತದ ಆದ್ಯತೆಗಳು, ಪ್ರಧಾನಮಂತ್ರಿ ನರೇಂದ್ರ ಮೋದಿಯವರ 'ಸೆಕ್ಯೂರ್ ಎಸ್‌ಸಿಓ' ಎಂಬ ಪರಿಕಲ್ಪನೆಯ ಮೇಲೆ ರೂಪುಗೊಂಡಿವೆ ಎಂದು ಸಚಿವಾಲಯ ಹೇಳಿದೆ. ಸೆಕ್ಯೂರ್‌ನ ವಿಸ್ತೃತ ರೂಪ, ಭದ್ರತೆ, ಆರ್ಥಿಕ ಸಹಕಾರ, ಸಂಪರ್ಕ, ಏಕತೆ, ಸಾರ್ವಭೌಮತ್ವ ಮತ್ತು ಪ್ರಾದೇಶಿಕ ಸಮಗ್ರತೆಗೆ ಗೌರವ ಹಾಗೂ ಪರಿಸರ ಸಂರಕ್ಷಣೆ ಎಂಬುದಾಗಿದೆ. ಭಾರತವು ತನ್ನ ಮೊದಲ ಎಸ್‌ಸಿಓ ಅಧ್ಯಕ್ಷತೆಯಲ್ಲಿ, ಕಳೆದ ವರ್ಷ ಜುಲೈ ೪ ರಂದು ಕೌನ್ಸಿಲ್ ಆಫ್ ಹೆಡ್ಸ್‌ನ ೨೩ ನೇ ಸಭೆಯನ್ನು ವರ್ಚುವಲ್ ಮೂಲಕ ಆಯೋಜಿಸಿತ್ತು.

<><*<><>*><>

ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್, ನವದೆಹಲಿಯಲ್ಲಿಂದು ನಡೆಯಲಿರುವ ಗ್ಲೋಬಲ್ ಇಂಡಿಯಾ ಕೃತಕ ಬುದ್ಧಿಮತ್ತೆ ಶೃಂಗಸಭೆ ೨೦೨೪ ಅನ್ನು ಉದ್ಘಾಟಿಸಲಿದ್ದಾರೆ. ಎರಡು-ದಿನಗಳ ಕಾಲ ನಡೆಯುವ ಈ ಶೃಂಗಸಭೆಯಲ್ಲಿ, ಕೃತಕ ಬುದ್ಧಿಮತ್ತೆಯ ಬಳಕೆ ಮತ್ತು ನಿರ್ವಹಣೆ; ಪ್ರತಿಭೆಗಳ ಪೋಷಣೆ ಮತ್ತು ಕೃತಕ ಬುದ್ಧಿಮತ್ತೆ ಕ್ಷೇತ್ರದಲ್ಲಿನ ಆವಿಷ್ಕಾರದ ಸೇರಿದಂತೆ ಇತರ ನಿರ್ಣಾಯಕ ಅಂಶಗಳ ಕುರಿತು ವಿಸ್ತೃತ ಚರ್ಚೆ ನಡೆಯಲಿದೆ.

<><*<><>*><>

ಜರ್ಮನಿಯಲ್ಲಿ ನಡೆಯುತ್ತಿರುವ ಯುರೋಪಿಯನ್ ಫುಟ್‌ಬಾಲ್ ಚಾಂಪಿಯನ್‌ಶಿಪ್‌ನಲ್ಲಿ ಕಳೆದ ರಾತ್ರಿ ನಡೆದ ಪಂದ್ಯದಲ್ಲಿ ಟರ್ಕಿಯು, ಆಸ್ಟ್ರಿಯಾವನ್ನು ೨-೧ ರಿಂದ ಸೋಲಿಸುವ ಮೂಲಕ ಕ್ವಾರ್ಟರ್-ಫೈನಲ್‌ಗೆ ಅರ್ಹತೆ ಪಡೆದುಕೊಂಡಿದೆ. ಟರ್ಕಿಯ ಡಿಫೆಂಡರ್ ಮೆರಿಹ್ ಡೆಮಿರಾಲ್ ಕೇವಲ ೫೭ ಸೆಕೆಂಡುಗಳ ನಂತರ ಗೋಲು ಹೊಡೆದು ಯುರೋಪಿಯನ್ ಚಾಂಪಿಯನ್‌ಶಿಪ್ ನಾಕೌಟ್ ಸುತ್ತಿನ ಇತಿಹಾಸದಲ್ಲಿ ಅತ್ಯಂತ ವೇಗದ ಗೋಲು ಎಂಬ ಹೊಸ ದಾಖಲೆಯನ್ನು ಸೃಷ್ಟಿಸಿದರು. ೫೯ನೇ ನಿಮಿಷದಲ್ಲಿ ಡೆಮಿರಾಲ್ ತನ್ನ ಎರಡನೇ ಗೋಲು ಬಾರಿಸಿದರು, ಆಸ್ಟ್ರಿಯಾದ ಮೈಕಲ್ ಗ್ರೆಗೊರಿಟ್ಜ್ ತನ್ನ ತಂಡದ ಪರ ಏಕೈಕ ಗೋಲು ದಾಖಲಿಸಿದರು. ಟರ್ಕಿ ಇದೇ ಭಾನುವಾರ ನೆದರ್ಲೆಂಡ್ಸ್ ಅನ್ನು ಎದುರಿಸಲಿದೆ. ನೆದರ್ಲ್ಯಾಂಡ್ಸ್ ೧೬ ವರ್ಷಗಳ ನಂತರ ಮೊದಲ ಬಾರಿಗೆ ಕ್ವಾರ್ಟರ್ ಫೈನಲ್‌ಗೆ ಪ್ರವೇಶ ಪಡೆದುಕೊಂಡಿದೆ.

<><*<><>*><>

ಲಂಡನ್‌ನಲ್ಲಿ ನಡೆಯುತ್ತಿರುವ ೨೦೨೪ರ ವಿಂಬಲ್ಡನ್ ಟೆನಿಸ್ ಟೂರ್ನಿಯಲ್ಲಿ ಪುರುಷರ ಸಿಂಗಲ್ಸ್‌ನ ಮೊದಲ ಸುತ್ತಿನಲ್ಲಿ ನೊವಾಕ್ ಜೊಕೊವಿಕ್ ಅವರು ಜೆಕ್ ಆಟಗಾರ ವಿಟ್ ಕೊಪ್ರಿವಾ ಅವರನ್ನು ೬-

೩, ೬-೨, ೬-೨ ರ ನೇರ ಸೆಟ್‌ಗಳಿಂದ ಸೋಲಿಸಿದರು. ಮಹಿಳೆಯರ ಸಿಂಗಲ್ಸ್‌ನಲ್ಲಿ ಸ್ಪೇನ್‌ನ ಜೆಸ್ಸಿಕಾ ಬೌಜಾಸ್ ಮನೇರೊ ಅವರು ಮಹಿಳಾ ಹಾಲಿ ಚಾಂಪಿಯನ್ ಜೆಕ್ ಗಣರಾಜ್ಯದ ಮಾರ್ಕೆಟಾ ವೊಂಡ್ರೊಸೊವಾ ಅವರನ್ನು ೬-೪, ೬-೨ ರ ಅಂತರದಲ್ಲಿ ಸೋಲಿಸಿದರು. ಎರಡನೇ ಸುತ್ತಿನಲ್ಲಿ ಬೌಜಾಸ್ ಮನ್ಯೆರೊ ಅವರು ಕ್ರಿಸ್ಟಿನಾ ಬುಕ್ಸಾ ಅವರನ್ನು ಎದುರಿಸಲಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ <>*><>**